# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ

## SC No. 41/2024

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ಎನ್.ಎಸ್ ಉತ್ತಪ್ಪ** | **PW - 8** |
| ತಂದೆಯ ಹೆಸರು | : | **ಸುಬ್ಬಯ್ಯ** | **CW - 9** |
| ವಯಸ್ಸು | : | **50 ವರ್ಷ** | |
| ವೃತ್ತಿ | : | **ವ್ಯವಸಾಯ** | |
| ವಾಸ | : | **ಕುಂದಚೇರಿ ಗ್ರಾಮ, ಮಡಿಕೇರಿ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 15-03-2025 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ</u>**

1. ನನಗೆ ಚಾಸಾ-1 ಇವರ ಪರಿಚಯ ಇರುತ್ತದೆ. ಆರೋಪಿತನ ಪರಿಚಯ ಇರುತ್ತದೆ. ನನಗೆ ಮೃತ ನಂದೀಶನ ಪರಿಚಯ ಇತ್ತು. ಸುಮಾರು ಒಂದು ವರೆ ವರ್ಷದ ಹಿಂದೆ ನಾನು ತೋಟಕ್ಕೆ ಹೋಗುವಾಗ ಪೊಲೀಸರು ಪೂವಯ್ಯನವರ ಮನೆ ಹತ್ತಿರ ಕರೆದುಕೊಂಡು ಹೋಗಿ ಪಂಚನಾಮೆ ಮೇಲೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಪಂಚನಾಮೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ಸಾಕ್ಷಿ ಸಹಿಯನ್ನು **ನಿಪಿ-2(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿ ಪೊಟೋಗಳನ್ನು ನೋಡಿ ಗುರುತಿಸಿದ್ದು, ಪೊಟೋಗಳು ಈಗಾಗಲೇ ನಿಪಿ-3 ರಿಂದ ನಿಪಿ-7 ಎಂದು ಗುರುತಿಸಲಾಗಿದೆ. ಪೊಲೀಸರು ಪಂಚನಾಮೆ ಮಾಡುವಾಗ ರಕ್ತದ ಕಲೆಗಳನ್ನು ಸಂಗ್ರಹಿಸಿರುತ್ತಾರೆ. ಬೇರೆ ವಸ್ತುಗಳನ್ನು ವಶಪಡಿಸಿಕೊಂಡ ಬಗ್ಗೆ ನನಗೆ ಮಾಹಿತಿ ಇಲ್ಲ. ಪಂಚನಾಮೆಯಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನಗೆ ಪಂಚನಾಮೆ ಓದಿ ಹೇಳಿರುವುದಿಲ್ಲ. ಪೊಲೀಸರ ಮುಂದೆ ನಾನು ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ. ಸಾಕ್ಷಿ ಮುದ್ದೆಮಾಲು ನೋಡಿ ಗುರುತಿಸಿರುವುದಿಲ್ಲ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**ಪಾಟೀಸವಾಲು- ಸರ್ಕಾರಿ ಅಭಿಯೋಜಕರಿಂದಃ**

1. ದಿನಾಂಕ 27.11.2023 ರಂದು ಪ್ರಾಸಾ-1 ರವರ ಮನೆಯ ಮುಂದಿನ ಭಾಗದಲ್ಲಿ ಪ್ರಾಸಾ-1 ರವರು ತೋರಿಸಿದ ಸ್ಥಳದ ಪಂಚನಾಮೆಯನ್ನು ಪೊಲೀಸರು ಮುಂಜಾನೆ 9.30 ರಿಂದ 11.00 ಗಂಟೆ ವರೆಗೆ ಸ್ಥಳದ ಪಂಚನಾಮೆ ಮಾಡಿ ಸ್ಥಳದಿಂದ ಸಿಮೆಂಟ್ ಕಂಬದಿಂದ ರಕ್ತ, ಸಿಮೆಂಟ್ ಕಂಬದಿಂದ ತೆಗೆದ ಪೇಯಿಂಟ್ ನ್ನು ಹಾಗೂ SBBL ಗನ್ ನ ತುಂಡಾದ ಭಾಗಗಳು, ಮಾಸಲು ಬಿಳಿ ಬಣ್ಣದ ಬಟ್ಟೆ ವಶಪಡಿಸಿಕೊಂಡಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ನಾನು ಪೊಲೀಸರ ಮುಂದೆ ಈಗೆ ಓದಿ ಹೇಳಿದಂತೆ "ನಾನು ಈ ಮೇಲಿನ ವಿಳಾಸದಲ್ಲಿ ........................ ಎಂದು ಹೇಳಿಕೆ ಕೊಟ್ಟಿರುತ್ತೇನೆ" ಎಂದು ಹೇಳಿಕೆ ಕೊಟ್ಟಿರುವುದಿಲ್ಲ. ಸದರಿ ಹೇಳಿಕೆಯನ್ನು **ನಿಪಿ-18** ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲು- ಆರೋಪಿ ಪರ ವಕೀಲರಾದ ಶ್ರೀ. ಓ.ಎಸ್.ಸಿ ರವರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು-ಮಡಿಕೇರಿ.